# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಸೋಮವಾರ, ದಿನಾಂಕ:19ನೇ ಫೆಬ್ರವರಿ, 2024

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2024ನೇ ಫೆಬ್ರವರಿ, 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2024ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

ಮೂರನೇ ದಿನ

### 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಶಾಂತರಾಮ್ ಬುಡ್ನ ಸಿದ್ದಿ, ಡಾ: ತಳವಾರ್ ಸಾಬಣ್ಣ, ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಹಾಗೂ ಶ್ರೀ ಮುನಿರಾಜು ಗೌಡ ಪಿ.ಎಂ. ಅವರುಗಳು** ರಾಜ್ಯದಲ್ಲಿ ಇತ್ತೀಚೆಗೆ ಕೊಲೆ, ಕೋಮು ಗಲಭೆ, ಅತ್ಯಾಚಾರ, ಅಪರಾಧ ಕೃತ್ಯಗಳು ಮತ್ತು ಮಾರಣಾಂತಿಕ ಹಲ್ಲೆ ಪ್ರಕರಣಗಳು ಹೆಚ್ಚಾಗಿದ್ದು, ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಸಿದಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

.2..

೦೨. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ನೋಂದಾಯಿತ "ಎ" ಮತ್ತು "ಬಿ" ದರ್ಜೆ ದೇವಾಲಯಗಳಲ್ಲಿ ಭಕ್ತರಿಗೆ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದಿರುವುದು ಹಾಗೂ ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆಗೆ ಸರ್ಕಾರ ಸೂಕ್ತ ಕ್ರಮ ವಹಿಸದಿರುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦೪. **ಶ್ರೀ ಸುನೀಲ್ ವಲ್ಯಾಪುರ್** ಅವರು ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿರುವ ರಾಷ್ಟ್ರೀಯ/ರಾಜ್ಯ/ಜಿಲ್ಲಾ ಹೆದ್ದಾರಿಗಳ ಕಳಪೆ ಗುಣಮಟ್ಟದ ಕಾಮಗಾರಿಗಳಿಂದ ಹಾಗೂ ಅವೈಜ್ಞಾನಿಕ ರಸ್ತೆ ತಿರುವುಗಳಿಂದ ಅಪಘಾತಗಳು ಹೆಚ್ಚುತ್ತಿರುವ ಕುರಿತು ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

೦೫. **ಶ್ರೀಯುತರುಗಳಾದ ವೈ.ಎಂ. ಸತೀಶ್, ಡಿ.ಎಸ್. ಅರುಣ್, ಕೆ.ಎಸ್. ನವೀನ್ ಹಾಗೂ ಎಸ್. ರುದ್ರೇಗೌಡ** ಅವರುಗಳು ತುಂಗಭದ್ರಾ ನದಿಯಲ್ಲಿ ಹಾನಿಕಾರಕ ಲೋಹಗಳು ಪತ್ತೆಯಾಗಿದ್ದು, ಕಲುಷಿತ ನೀರು ಕುಡಿಯಲು ಮತ್ತು ಕೃಷಿಗೆ ಬಳಸಲು ಯೋಗ್ಯವಲ್ಲದಿರುವುದರಿಂದ ಶುದ್ಧೀಕರಿಸಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಎಸ್.ವ್ಹಿ. ಸಂಕನೂರ** ಅವರುಗಳು ರಾಜ್ಯದಲ್ಲಿನ ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಸಂದರ್ಭದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಸರಳೀಕರಿಸಿರುವ ಮಾರ್ಗಸೂಚಿಗಳನ್ನು ಪೂರೈಸಿರುವ ಶಾಲೆಗಳಿಗೆ ಹತ್ತು ವರ್ಷಕ್ಕೊಮ್ಮೆ ನವೀಕರಿಸುವಂತೆ ಆದೇಶ ಹೊರಡಿಸದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಯ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ನಿರಾಣಿ ಹಣಮಂತ ರುದ್ರಪ್ಪ** ಅವರುಗಳು ಹಿಂದುಳಿದ ವರ್ಗಗಳ ವಸತಿ ಶಾಲೆ ಮತ್ತು ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿರುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀಯುತರುಗಳಾದ ಬಿ.ಎಂ. ಫಾರೂಖ್, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ, ಕೆ.ಎ. ತಿಪ್ಪೇಸ್ವಾಮಿ, ಗೋವಿಂದರಾಜು ಹಾಗೂ ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದ ಕೊಬ್ಬರಿ ಬೆಳೆಗಾರರಿಂದ ಹೆಚ್ಚುವರಿಯಾಗಿ ಒಂದು ಲಕ್ಷ ಮೆಟ್ರಿಕ್ ಟನ್ ಕೊಬ್ಬರಿ ಖರೀದಿಸುವಂತೆ ಕೇಂದ್ರಕ್ಕೆ ಒತ್ತಾಯಿಸುವುದರ ಜೊತೆಗೆ ಕೇಂದ್ರದ ಬೆಂಬಲ ಯೋಜನೆಯಡಿ ಕೊಬ್ಬರಿ ಖರೀದಿಗೆ ನೋಂದಣಿ ಅವಕಾಶ ವಿಸ್ತರಿಸುವ ಕುರಿತು ಪ್ರಸ್ತಾಪಿಸುವುದು.

.೩..

೦೪. **ಶ್ರೀಯುತರುಗಳಾದ ಕೆ.ಎಸ್. ನವೀನ್, ಕೇಶವ ಪ್ರಸಾದ್ ಎಸ್, ಡಿ.ಎಸ್. ಅರುಣ್ ಹಾಗೂ ಹೆಚ್.ಎಸ್. ಗೋಪಿನಾಥ್** ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಮೂಲಗಳಿಂದ ಸಂಗ್ರಹವಾಗುವ ತೆರಿಗೆ ಹಾಗೂ ಆದಾಯ ಸೇರಿದಂತೆ ಬೆಂಗಳೂರಿನಲ್ಲಿ ಸಂಗ್ರಹವಾಗುವ ಜಿ.ಎಸ್.ಟಿ. ತೆರಿಗೆಯಲ್ಲಿನ ಖರ್ಚು/ವೆಚ್ಚಗಳ ಸಮಗ್ರ ಚಿತ್ರಣದ ಬಗ್ಗೆ ಶ್ವೇತಪತ್ರ ಹೊರಡಿಸುವ ಕುರಿತು ಪ್ರಸ್ತಾಪಿಸುವುದು.

೦೫. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಟರ್ಫ್ ಕ್ಲಬ್‌ನವರು ನೂರಾರು ಕೋಟಿ ರೂಪಾಯಿಗಳ ತೆರಿಗೆಯನ್ನು ಪಾವತಿಸದೆ ಸರ್ಕಾರಕ್ಕೆ ವಂಚಿಸಿರುವ ಕುರಿತು ಪ್ರಸ್ತಾಪಿಸುವುದು.

## 06. ವಿತ್ತೀಯ ಕಾರ್ಯಕಲಾಪ

2024-25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**